# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 2102 (2378) |
| ಸದಸ್ಯರ ಹೆಸರು | : ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : 27.03.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿವಿಧ ಭಾಗಗಳಲ್ಲಿ ತೆಂಗಿನ ಮರಗಳಿಗೆ ತಗುಲಿರುವ ಸುಳಿ ರೋಗ ಮತ್ತು ಕಪ್ಪುತಲೆ ಹುಳು ಬಾಧೆಯನ್ನು ತಡೆಗಟ್ಟಲು ಕೃಷಿ ಮತ್ತು ತೋಟಗಾರಿಕೆ ಇಲಾಖೆ ಕೈಗೊಂಡಿರುವ ಕ್ರಮಗಳೇನು; | ತೆಂಗಿನ ಮರಗಳಿಗೆ ತಗುಲಿರುವ ಸುಳಿ ರೋಗ ಮತ್ತು ಕಪ್ಪುತಲೆ ಹುಳು ಬಾಧೆಯನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳು ಕೆಳಗಿನಂತಿವೆ:-<br><br>1. ತೆಂಗಿನ ತೋಟಗಳ ಪುನ:ಶ್ಚೇತನ, ಮರುನಾಟಿ ಮತ್ತು ನಿರ್ವಹಣೆಯಿಂದ ತೆಂಗಿನ ಮರಗಳು ಸದೃಡಗೊಂಡು ರೋಗ/ ಕೀಟ ನಿರೋಧಕ ಶಕ್ತಿ ಬೆಳಸಿಕೊಳ್ಳುತ್ತವೆ. ಆದುದರಿಂದ ಈ ಚಟುವಟಿಕೆಗಳಿಗಾಗಿ ಪ್ರತಿ ಫಲಾನುಭವಿಗೆ ಒಂದು ಹೆಕ್ಟೇರ್ ವರೆಗೆ ರೂ. 54,000/- ಗಳನ್ನು ಎರಡು ವರ್ಷದ ಅವಧಿಗೆ ಸಹಾಯಧನ ನೀಡಲಾಗುತ್ತಿದೆ. ಮೊದಲನೇ ವರ್ಷ ರೂ.45,250/- ಗಳನ್ನು ಹಾಗೂ ಎರಡನೇ ವರ್ಷದ ನಿರ್ವಹಣೆಗೆ ರೂ.8,750/ ಗಳನ್ನು ನೀಡಲಾಗುತ್ತಿದೆ. ಮೊದಲನೇ ವರ್ಷದಲ್ಲಿ ರೋಗ/ಕೀಟ ಬಾಧಿತ, ಒಣಗಿದ ಮರ ತೆಗೆಯಲು, ಹೊಸ ತೆಂಗಿನ ಗಿಡ ನೆಡಲು, ನಿರ್ವಹಣೆಗಾಗಿ ಪೋಷಕಾಂಶಗಳು, ಬೇವಿನ ಹಿಂಡಿ, ಹಸಿರೆಲೆ ಗೊಬ್ಬರದ ಬೀಜಗಳು, ಸಸ್ಯಸಂರಕ್ಷಣ ಔಷಧಿಗಳನ್ನು ನೀಡಲು 4571 ರೈತರಿಗೆ 2423 ಹೆಕ್ಟೇರ್ ಪ್ರದೇಶದಲ್ಲಿ ರೂ.9.51 ಕೋಟಿಗಳ ಸಹಾಯಧನ ನೀಡಲಾಗಿದೆ. ಎರಡನೇ ವರ್ಷದ ನಿರ್ವಹಣೆ ಕಾರ್ಯಕ್ರಮಕ್ಕೆ ರೂ.1.77 ಕೋಟಿಗಳ ಅನುದಾನ ಬಿಡುಗಡೆಯಾಗಿದ್ದು, 2021 ಹೆಕ್ಟೇರ್ ಪ್ರದೇಶಕ್ಕೆ 4763 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿರುತ್ತದೆ.<br><br>2. ರೈತರ ತಾಕುಗಳಲ್ಲಿ ಪ್ರಾತ್ಯಕ್ಷತೆ ಹಾಗೂ ನಿರ್ವಹಣೆಗಾಗಿ ಒಂದು ಹೆಕ್ಟೇರ್ ಗೆ ರೂ. 35,000/- ಗಳಂತೆ 2 ವರ್ಷಗಳ ಅವಧಿಗೆ, ಮೊದಲನೇ ವರ್ಷ ರೂ.17,500/- ಗಳು ಮತ್ತು |

| | | |
|---|---|---|
| | | ಎರಡನೇ ವರ್ಷದಲ್ಲಿ ರೂ.17,500/- ಗಳಂತೆ ಸಹಾಯಧನ ನೀಡಲಾಗುತ್ತಿದೆ. ತೆಂಗು ಬೆಳೆಯ ರೋಗ ಮತ್ತು ಕೀಟಬಾಧಿತ ತಾಕುಗಳನ್ನು ಗುಚ್ಛಗಳಲ್ಲಿ (Clusters) ಆಯ್ಕೆ ಮಾಡಿ ಸಹಾಯಧನ ನೀಡಲಾಗಿರುತ್ತದೆ. ಈ ಕಾರ್ಯಕ್ರಮದಡಿ 41185 ರೈತರಿಗೆ 28420 ಹೆಕ್ಟೇರ್ ಪ್ರದೇಶದಲ್ಲಿ ರೂ. 49.73 ಕೋಟಿಗಳ ಸಹಾಯಧನ ಒದಗಿಸಲಾಗಿದೆ.<br><br>3. ತೆಂಗು ಬೆಳೆಯಲ್ಲಿ ಕಂಡು ಬರುವ ಕಪ್ಪುತಲೆಹುಳುವಿನ ನಿಯಂತ್ರಣಕ್ಕಾಗಿ ಗೋನಿಯೋಜಸ್ ಎಂಬ ಪರೋಪಜೀವಿಗಳು ಹಾಗೂ ಬಿಳಿನೊಣದ ನಿಯಂತ್ರಣಕ್ಕಾಗಿ ಐಸಿರಿಯಾ ಜೈವಿಕ ಕೀಟನಾಶಕವನ್ನು ಇಲಾಖೆಯ 23 ಪ್ರಯೋಗ ಶಾಲೆಗಳಲ್ಲಿ ಉತ್ಪಾದನೆ ಮಾಡಿ ಉಚಿತವಾಗಿ ವಿತರಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಈ ಉದ್ದೇಶಕ್ಕಾಗಿ ಒಟ್ಟು ರೂ. 1.20 ಕೋಟಿಗಳ ಅನುದಾನ ವಿನಿಯೋಗಿಸಿ 4039 ಬೆಳೆಗಾರರಿಗೆ ವಿತರಿಸಲಾಗಿದೆ. |
| ಆ) | ಮಾರುಕಟ್ಟೆಯಲ್ಲಿ ತೆಂಗಿನಕಾಯಿ ಬೆಲೆ ಗಗನಕ್ಕೇರಿದ್ದರೂ ರೈತರ ತೋಟಗಳಲ್ಲಿ ಇಳುವರಿ ಇಲ್ಲದೆ ರೈತರು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗಮನಕ್ಕೆ ಬಂದಿದೆ. |
| ಇ) | ತೆಂಗು ಬೆಳೆಗಾರರ ಆದಾಯ ಹೆಚ್ಚಿಸಲು ಮತ್ತು ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು; ಈ ಯೋಜನೆಗಳು ಬೆಳೆಗಾರರಿಗೆ ಸಮರ್ಪಕವಾಗಿ ತಲುಪುತ್ತಿವೆಯೇ; | ತೆಂಗು ಬೆಳೆಯ ಆದಾಯ ಹೆಚ್ಚಿಸಲು ಮತ್ತು ತೋಟಗಾರಿಕೆ ಉತ್ಪನ್ನಗಳ ಮೌಲ್ಯವರ್ಧನೆಗಾಗಿ ತೆಂಗು ಅಭಿವೃದ್ಧಿ ಮಂಡಳಿ ವತಿಯಿಂದ "ತೆಂಗಿನ ತಂತ್ರಜ್ಞಾನ ಮಿಷನ್ (TMOC)" ಯೋಜನೆಯಡಿ ಸಂಸ್ಕರಣ ತಂತ್ರಜ್ಞಾನಗಳ ಅಳವಡಿಕೆಗೆ ಮತ್ತು ಉತ್ಪನ್ನಗಳ ವೈವಿಧ್ಯೀಕರಣಕ್ಕಾಗಿ ಸಹಾಯಧನ ನೀಡಲಾಗುತ್ತಿದೆ. ಸಾಮಾನ್ಯ ಪ್ರದೇಶಗಳಲ್ಲಿ ಯೋಜನಾ ವೆಚ್ಚದ 25% MIDH (Mission for Integrated Development of Horticulture) ಮಾರ್ಗಸೂಚಿ ಅನುಸಾರ ನೀಡಲಾಗುತ್ತಿದೆ. ಗರಿಷ್ಠ ರೂ. 500 ಲಕ್ಷಗಳವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ. |

| | | |
|---|---|---|
| ಈ) | ರೋಗಬಾಧೆಯಿಂದ ಒಣಗುತ್ತಿರುವ ತೆಂಗಿನ ಮರಗಳಿಂದ ನಷ್ಟ ಅನುಭವಿಸುತ್ತಿರುವ ರೈತರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ತೆಂಗಿನ ಮರಗಳಿಂದ ನಷ್ಟ ಅನುಭವಿಸುತ್ತಿರುವ ರೈತರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸುವ ಪ್ರಸ್ತಾವನೆ ತೋಟಗಾರಿಕೆ ಇಲಾಖೆಯಲ್ಲಿ ಇರುವುದಿಲ್ಲ. |
| ಉ) | ತೆಂಗು ಬೆಳೆಗಾರರಲ್ಲಿ ಆತ್ಮಸ್ಥೈರ್ಯ ತುಂಬಲು ಮತ್ತು ವೈಜ್ಞಾನಿಕವಾಗಿ ರೋಗ ನಿಯಂತ್ರಣ ಮಾಡಲು ಅಧಿಕಾರಿಗಳ ತಂಡವು ತೋಟಗಳಿಗೆ ಭೇಟಿ ನೀಡಿ ಮಾರ್ಗದರ್ಶನ ನೀಡುವ ವ್ಯವಸ್ಥೆ ಮಾಡಲಾಗಿದೆಯೇ? | ಹೌದು, ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ತಜ್ಞರು ಹಾಗೂ Central Plantation Crops Research Institute (CPCRI) ಕಾಸರಗೋಡು, CDB ಅಧಿಕಾರಿಗಳು ಮತ್ತು ಇಲಾಖಾ ಅಧಿಕಾರಿಗಳ ಸಹಯೋಗದೊಂದಿಗೆ ತೆಂಗಿನ ಬೆಳೆಗೆ ಕೈಗೊಳ್ಳಬಹುದಾದ ಸಸ್ಯ ಸಂರಕ್ಷಣಾ ಕ್ರಮಗಳು ಹಾಗೂ ಪೋಷಕಾಂಶಗಳ ನಿರ್ವಹಣೆ ಕುರಿತು ತಾಕುಗಳ ಭೇಟಿ ನೀಡಿ ತರಬೇತಿ, ಕಾರ್ಯಾಗಾರ, ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ರೈತರಿಗೆ ಮಾಹಿತಿ ಒದಗಿಸಲಾಗುತ್ತಿದೆ. |

ಸಂಖ್ಯೆ: HORTI 189 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು